ಡಾ||ಅಂಬೇಡ್ಕರ್ ದತ್ತಿ ಪೀಠವನ್ನು ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಸ್ಥಾಪಿಸುವುದು

583 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ಒಟ್ಟು ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು?

ಆ) ಅವುಗಳ ಪೈಕಿ ಡಾ|| ಅಂಬೇಡ್ಕರ್ ದತ್ತಿ ಪೀಠಗಳನ್ನು ಸ್ಥಾಪಿಸಲಾಗಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು?

ಇ) ಈ ಪೀಠದ ಸ್ಥಾಪನೆಗಾಗಿ ಸರ್ಕಾರದವರು ಹಣ ಸಹಾಯ ಮಾಡಿರುವರೇ?

ಈ) ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲೂ ಈ ಪೀಠವನ್ನು ಸ್ಥಾಪಿಸಲು ಸರ್ಕಾರದವರು ಪರಿಶೀಲಿಸುವರೇ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಆರು ಮತ್ತು ಕನ್ನಡ ವಿಶ್ವವಿದ್ಯಾಲಯ ಒಂದು.

ಆ) ಒಂದು

ಇ) ಹೌದು (ಮೈಸೂರು ವಿಶ್ವವಿದ್ಯಾಲಯ)

ಈ) ಮಂಗಳೂರು ವಿಶ್ವ ವಿದ್ಯಾಲಯದಲ್ಲಿ ಸ್ಥಾಪಿಸುವ ವಿಚಾರ ಪರಿಶೀಲನೆಯಲ್ಲಿದೆ.

ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿರುವ ಕಾಲೇಜುಗಳ ಸಂಖ್ಯೆ

555 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಉನ್ನತ ಶಿಕ್ಷಣ ಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿರುವ ಕಾಲೇಜುಗಳ ಒಟ್ಟಾರೆ ಸಂಖ್ಯೆ ಎಷ್ಟು. ಮೈಸೂರು, ಮಂಗಳೂರು, ಕುವೆಂಪು ಮತ್ತು ಗುಲ್ಬರ್ಗಾ ವಿಶ್ವವಿದ್ಯಾಲಯಗಳ ಪರಿಮಿತಿಯಲ್ಲಿನ ಕಾಲೇಜುಗಳಲ್ಲಿನ ಒಟ್ಟಾರೆ ಸಂಖ್ಯೆ ಎಷ್ಟು;

ಆ) ಬೆಂಗಳೂರು ವಿಶ್ವವಿದ್ಯಾಲಯದ ಪರಿಮಿತಿಯಲ್ಲಿರುವ ಕಾಲೇಜುಗಳ ಸಂಖ್ಯೆಯು ಬೆಂಗಳೂರು ವಿಶ್ವವಿದ್ಯಾಲಯವನ್ನು ವಿಭಜಿಸಿ ಎರಡು ವಿಶ್ವವಿದ್ಯಾಲಯಗಳನ್ನಾಗಿ ಮಾಡುವ ಅತ್ಯಾವಶ್ಯಕತೆ ಇದೆ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ದಿಶೆಯಲ್ಲಿ ಸರ್ಕಾರ ಏನು ಕ್ರಮ ಕೈಗೊಳ್ಳುತ್ತಿದೆ?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) ಬೆಂಗಳೂರು - 318
ಮಂಗಳೂರು - 107
ಕುವೆಂಪು - 126
ಗುಲ್ಬರ್ಗಾ - 148
ಮೈಸೂರು - 117
ಕರ್ನಾಟಕ - 253

ಆ) ಹೌದು

ಇ) ವಿಷಯ ಸಮಿತಿಯ ಶಿಫಾರಸ್ಸನ್ನು ನಿರೀಕ್ಷಿಸಲಾಗುತ್ತಿದೆ.